## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಇ. ಅಂಜನ್ ಕುಮಾರ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್. ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸನಗರ ಹಾಗೂ ಇನ್ನಿತರ ಆಪಾದಿತರುಗಳ ವಿರುದ್ಧ ಇಲಾಖಾ ವಿಚಾರಣೆ ಕುರಿತು.

ಉಲ್ಲೇಖ:
1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 20 ಇಎನ್‌ಕ್ಯೂ 2010, ದಿನಾಂಕ: 26.11.2015.
2) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 20 ಇಎನ್‌ಕ್ಯೂ 2010, ದಿನಾಂಕ: 31.03.2016.
3) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 60 ಇಎನ್‌ಕ್ಯೂ 2016, ದಿನಾಂಕ: 10.01.2018.

****

**ಪ್ರಸ್ತಾವನೆ:**

ಶಿವಮೊಗ್ಗ ಜಿಲ್ಲೆ, ಹೊಸನಗರ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದಲ್ಲಿ 2004 ರಿಂದ 2007ರ ಅವಧಿಯಲ್ಲಿ ನೆರೆ ಹಾವಳಿಯ 79 ಕಾಮಗಾರಿಗಳನ್ನು ಜಿಲ್ಲಾಧಿಕಾರಿಗಳಿಂದ ಮಂಜೂರಾತಿ ಪಡೆದು ಮುಂಗಡ ಹಣ ಪಡೆದುಕೊಂಡದ್ದಕ್ಕನುಗುಣವಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೆ ಲೋಪವೆಸಗಿರುವ ಆರೋಪಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ಮೊದಲನೆಯದಾಗಿ ಮೇಲೆ ಕ್ರಮ ಸಂಖ್ಯೆ (1)ರ ದಿನಾಂಕ: 26.11.2015ರ ಆದೇಶದಲ್ಲಿ ಶ್ರೀ ವಿ.ಪಿ. ಜಹಗೀರದಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿರುವುದನ್ನು ಬದಲಾವಣೆ ಮಾಡಿ ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ದಿನಾಂಕ: 31.03.2016ರ ಆದೇಶದಲ್ಲಿ ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ಮತ್ತು ಸಹಾಯಕ ಕಾರ್ಯದರ್ಶಿ (ಆಡಳಿತ) ಜಿಲ್ಲಾ ಪಂಚಾಯತ್, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

1. ಇ. ಅಂಜನ್ ಕುಮಾರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸನಗರ
2. ಶ್ರೀ ಬಿ.ಜೆ. ಪ್ರಭಾಕರ್ ರಾವ್, ಅಂದನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸನಗರ(ಪ್ರಸ್ತುತ ನಿವೃತ್ತ)
3. ಶ್ರೀ ಎಸ್.ಹೆಚ್. ಜಗನ್ನಾಥ್, ಅಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸನಗರ
4. ಶ್ರೀ ಎಂ.ಎಸ್. ಪಾಟಿಲ್, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸನಗರ
5. ಶ್ರೀ ಡಿ. ಜಗದೀಶನ್, ಅಂದಿನ ಲೆಕ್ಕಪರಿಶೋಧನಾಧಿಕಾರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಸಾಗರ
6. ಶ್ರೀ ಪ್ರಭಾಕರ್ ಜೋಗಳೇಕರ್, ಅಂದಿನ ಪ್ರಥಮ ದರ್ಜೆ ಲೆಕ್ಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಸಾಗರ
7. ಶ್ರೀ ಕೆ.ವಿ. ಅಣ್ಣಪ್ಪ, ದ್ವಿತೀಯ ದರ್ಜೆ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸನಗರ
8. ಶ್ರೀ ಸಿ.ಟಿ. ಆಂಜನಪ್ಪ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸನಗರ.

ಮೇಲ್ಕಂಡ ಆಪಾದಿತ ಅಧಿಕಾರಿ / ನೌಕರರ ಪೈಕಿ ಈ ಕೆಳಕಂಡ 05 ಜನ ಆಪಾಧಿತರು ತಮಗೆ ದಿನಾಂಕ: 23.12.2014 ಮತ್ತು 29.04,2015 ರಂದು ಜಾರಿ ಮಾಡಲಾದ ದೋಷಾರೋಪಣಾ ಪಟ್ಟಿ (ಅನುಬಂಧ- 1 ರಿಂದ 4) ಯನ್ನು ಪ್ರಶ್ನಿಸಿ ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಅರ್ಜಿ ಸಂಖ್ಯೆ: 5096-5099/2016 ಹಾಗೂ 7468/2016ರನ್ನು ಸಲ್ಲಿಸಿರುತ್ತಾರೆ.

1. ಶ್ರೀ ಬಿ.ಜೆ. ಪ್ರಭಾಕರ್ ರಾವ್, ನಿವೃತ್ತ ಸಹಾಯಕ ಇಂಜಿನಿಯರ್
2. ಶ್ರೀ ಸಿ.ಟಿ. ಆಂಜನಪ್ಪ, ಅಂದಿನ ಕಿರಿಯ ಇಂಜಿನಿಯರ್ (ಹಾಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್)
3. ಶ್ರೀ ಎಸ್.ಹೆಚ್. ಜಗನ್ನಾಥ್, ಸಹಾಯಕ ಇಂಜಿನಿಯರ್-2
4. ಶ್ರೀ ಮಹಾಂತೇಶಗೌಡ ಪಾಟಿಲ್, ಕಿರಿಯ ಇಂಜಿನಿಯರ್
5. ಇ. ಅಂಜನ್ ಕುಮಾರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್

ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಅರ್ಜಿ ಸಂಖ್ಯೆ: 5096-5099/2016 ಹಾಗೂ 7468/2016ಕ್ಕೆ ಸಂಬಂಧಿಸಿದಂತೆ ದಿನಾಂಕ: 20.06.2016 ಹಾಗೂ 26.08.2016ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ಮೇಲ್ಕಂಡ 05 ಜನ ಆಪಾಧಿತರಿಗೆ ದಿನಾಂಕ: 23.12.2014 ಮತ್ತು 20.04,2015 ರಂದು ಜಾರಿ ಮಾಡಲಾದ ದೋಷಾರೋಪಣಾ ಪಟ್ಟಿ (ಅನುಬಂಧ- 1 ರಿಂದ 4) ಗಳಿಗೆ ಮುಂದಿನ ಆದೇಶದವರೆಗೆ ತಡೆಯಾಜ್ಞೆ ನೀಡಿರುತ್ತದೆ. ಅಲ್ಲದೆ, ಸದರಿ ಪ್ರಕರಣದಲ್ಲಿನ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದ ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರು ದಿನಾಂಕ: 29.08.2017 ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿ ತಾವು ಈಗ ಶಿಸ್ತು ಪ್ರಕರಣಗಳನ್ನು ವಿಚಾರಣೆಗೆ ತೆಗೆದುಕೊಳ್ಳುತ್ತಿಲ್ಲವಾದ್ದರಿಂದ ಸದರಿ ಪ್ರಕರಣದಲ್ಲಿ ಬೇರೊಬ್ಬರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸುವಂತೆ ಕೋರಿದ ಪ್ರಯುಕ್ತ ಮೇಲೆ ಓದಲಾದ ಕ್ರಮಾಂಕ (3)ರ ಆದೇಶದಲ್ಲಿ ಶ್ರೀ ಹೆಚ್,ಪಿ. ರವೀಂದ್ರನಾಥ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಶಿವಮೊಗ್ಗ ಇವರನ್ನು ಈ ಕೆಳಕಂಡ 03 ಆಪಾದಿತರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ವಿಚಾರಣಾಧಿಕಾರಿಯವರನ್ನಾಗಿ ನೇಮಿಸಿ ಹಾಗೂ ಸಹಾಯಕ ಕಾರ್ಯದರ್ಶಿ (ಆಡಳಿತ) ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರನ್ನು ಮಂಡನಾಧಿಕಾರಿಯನ್ನಾಗಿ ಮುಂದುವರೆಸಿ ಆದೇಶಿಸಿದೆ ಹಾಗೂ ಪ್ರಕರಣದಲ್ಲಿನ ಉಳಿದ 05 ಆಪಾದಿತರುಗಳಿಗೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ನೀಡುವ ಆದೇಶದಂತೆ ಮುಂದಿನ ಕ್ರಮ ವಹಿಸಲಾಗುವುದೆಂದು ತಿಳಿಸಿದೆ.

1. ಶ್ರೀ ಡಿ. ಜಗದೀಶನ್, ಅಂದಿನ ಲೆಕ್ಕಪರಿಶೋಧನಾಧಿಕಾರಿ, ಪಂಚಾಯತ್ ರಾಜ್,
2. ಶ್ರೀ ಪ್ರಭಾಕರ ಜೋಗಳೇಕರ್, ಅಂದಿನ ಪ್ರಥಮ ದರ್ಜೆ ಲೆಕ್ಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್, ವಿಭಾಗ, ಸಾಗರ
3. ಶ್ರೀ ಕೆ.ವಿ. ಅಣ್ಣಪ್ಪ, ದ್ವಿತೀಯ ದರ್ಜೆ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸನಗರ

ಪ್ರಕರಣದಲ್ಲಿನ ಆಪಾದಿತ ಅಧಿಕಾರಿ / ನೌಕರರ ಪೈಕಿ ಈ ಕೆಳಕಂಡ 05 ಜನ ಆಪಾದಿತರು ತಮಗೆ ದಿನಾಂಕ: 23.12.2014 ಮತ್ತು 29.04,2015 ರಂದು ಜಾರಿ ಮಾಡಲಾದ ದೋಷಾರೋಪಣಾ ಪಟ್ಟಿ (ಅನುಬಂಧ- 1 ರಿಂದ 4) ಯನ್ನು ಪ್ರಶ್ನಿಸಿ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಸಲ್ಲಿಸಿದ್ದ ಅರ್ಜಿ ಸಂಖ್ಯೆ: 5096-5099/2016 ಹಾಗೂ 7468/2016ಕ್ಕೆ ಸಂಬಂಧಿಸಿದಂತೆ ಮಾನ್ಯ ನ್ಯಾಯ ಮಂಡಳಿಯು ದಿನಾಂಕ: 16.10.2019 ರಂದು ಅಂತಿಮ ತೀರ್ಪನ್ನು ನೀಡಿದ್ದು, ತೀರ್ಪಿನ ಉಧೃತ ಭಾಗ ಈ ಕೆಳಕಂಡಂತಿದೆ:-

> "........Hence, Persuing the entire materials both the factual as well as legal aspect, I am of the opinion that there is are no merits in the application. Accordingly, the above Applications are hereby rejected''

ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ: 16.10.2019 ರಂದು ನೀಡಿರುವ ತೀರ್ಪಿನಲ್ಲಿ ಅರ್ಜಿ ಸಂಖ್ಯೆ: 5096–5099/2016 ಹಾಗೂ 7468/2016ಗಳನ್ನು ರದ್ದುಪಡಿಸಿರುವುದರಿಂದ ಈ 05 ಆಪಾಧಿತ ಅಧಿಕಾರಿಗಳಾದ (1) ಶ್ರೀ ಬಿ.ಜೆ. ಪ್ರಭಾಕರ್ ರಾವ್, ನಿವೃತ್ತ ಸಹಾಯಕ ಇಂಜಿನಿಯರ್ (2) ಶ್ರೀ ಸಿ.ಟಿ. ಆಂಜನಪ್ಪ, ಅಂದಿನ ಕಿರಿಯ ಇಂಜಿನಿಯರ್ (ಹಾಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್) (3) ಶ್ರೀ ಎಸ್.ಹೆಚ್. ಜಗನ್ನಾಥ್, ಸಹಾಯಕ ಇಂಜಿನಿಯರ್–2 (4) ಶ್ರೀ ಮಹಾಂತೇಶಗೌಡ ಪಾಟಿಲ್, ಕಿರಿಯ ಇಂಜಿನಿಯರ್ (5) ಇ. ಅಂಜನ್ ಕುಮಾರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರುಗಳ ವಿರುದ್ಧ ಮಾಡಲಾದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ತೀರ್ಮಾನಿಸಿ, ಈಗಾಗಲೇ ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ 03 ಆಪಾಧಿತರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 60 ಇಎನ್‌ಕ್ಯೂ 2016, ದಿನಾಂಕ: 10.01.2018 ರಲ್ಲಿ ನೇಮಿಸಲಾಗಿರುವ ವಿಚಾರಣಾಧಿಕಾರಿಗಳಾದ ಶ್ರೀ ಹೆಚ್.ಪಿ. ರವೀಂದ್ರನಾಥ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಶಿವಮೊಗ್ಗ ಇವರಿಂದ ವಿಚಾರಣೆ ನಡೆಸಲು ತಿರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 60 ಇಎನ್‌ಕ್ಯೂ 2016, ಬೆಂಗಳೂರು, ದಿನಾಂಕ:21.04.2020</u>**

ಪ್ರಸ್ತಾವನೆಯನ್ನು ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶಿವಮೊಗ್ಗ ಜಿಲ್ಲೆ, ಹೊಸನಗರ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದಲ್ಲಿ 2004 ರಿಂದ 2007ರ ಅವಧಿಯಲ್ಲಿ ನೆರೆ ಹಾವಳಿಯ 79 ಕಾಮಗಾರಿಗಳನ್ನು ಜಿಲ್ಲಾಧಿಕಾರಿಗಳಿಂದ ಮಂಜೂರಾತಿ ಪಡೆದು ಮುಂಗಡ ಹಣ ಪಡೆದುಕೊಂಡದ್ದಕ್ಕನುಗುಣವಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೆ ಲೋಪವೆಸಗಿರುವ ಆರೋಪಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧವು ಸಹ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಈಗಾಗಲೇ ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ 03 ಆಪಾದಿತರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 60 ಇಎನ್‌ಕ್ಯೂ 2016, ದಿನಾಂಕ: 10.01.2018 ರಲ್ಲಿ ನೇಮಿಸಲಾಗಿರುವ ವಿಚಾರಣಾಧಿಕಾರಿಗಳಾದ ಶ್ರೀ ಹೆಚ್.ಪಿ. ರವೀಂದ್ರನಾಥ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಶಿವಮೊಗ್ಗ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಸಹಾಯಕ ಕಾರ್ಯದರ್ಶಿ (ಆಡಳಿತ) ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

1. ಶ್ರೀ ಬಿ.ಜೆ. ಪ್ರಭಾಕರ್ ರಾವ್, ನಿವೃತ್ತ ಸಹಾಯಕ ಇಂಜಿನಿಯರ್
2. ಶ್ರೀ ಸಿ.ಟಿ. ಆಂಜನಪ್ಪ, ಅಂದಿನ ಕಿರಿಯ ಇಂಜಿನಿಯರ್ (ಹಾಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್)
3. ಶ್ರೀ ಎಸ್.ಹೆಚ್. ಜಗನ್ನಾಥ್, ಸಹಾಯಕ ಇಂಜಿನಿಯರ್–2
4. ಶ್ರೀ ಮಹಾಂತೇಶಗೌಡ ಪಾಟಿಲ್, ಕಿರಿಯ ಇಂಜಿನಿಯರ್
5. ಇ. ಅಂಜನ್ ಕುಮಾರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಆದಷ್ಟು ತ್ವರಿತವಾಗಿ ಕೈಗೊಂಡು, ವಿಚಾರಣಾ ವರದಿಯನ್ನು ಮೂರು ತಿಂಗಳ ಒಳಗಾಗಿ ಸರ್ಕಾರಕ್ಕೆ ಸಲ್ಲಿಸುವುದು. ವಿಚಾರಣಾಧಿಕಾರಿಗಳು ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಮಂಜೂರು ಮಾಡಲಾಗುವುದು. ಇಲಾಖಾ ವಿಚಾರಣೆಗೆ ಅವಶ್ಯವಿರುವ ಸಿಬ್ಬಂದಿ, ಲೇಖನ ಸಾಮಗ್ರಿ ಮತ್ತು ಸ್ಥಳಾವಕಾಶ ಒದಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಶಿವಮೊಗ್ಗ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/04/2020

(ಎಸ್. ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು–ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು–01.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು-01

3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಶಿವಮೊಗ್ಗ

4. ಶ್ರೀ. ಹೆಚ್.ಪಿ. ರವೀಂದ್ರನಾಥ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು ಶಿವಮೊಗ್ಗ

5. ಸಹಾಯಕ ಕಾರ್ಯದರ್ಶಿ (ಆಡಳಿತ) ಜಿಲ್ಲಾ ಪಂಚಾಯತ್, ಶಿವಮೊಗ್ಗ

6. ಸಂಬಂಧಪಟ್ಟ ಅಧಿಕಾರಿ / ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಶಿವಮೊಗ್ಗ ರವರ ಮುಖಾಂತರ)

7. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು

8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು

9. ಸರ್ಕಾರದ ಉಪ ಕಾರ್ಯದರ್ಶಿಯವರು (ಆಡಳಿತ-1) ರವರ ಆಪ್ತ ಸಹಾಯಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು

10. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು